ಇಂದು ದಿಃ **09-03-2021** ರಂದು ಮುಕ್ತ ನ್ಯಾಯಾಲಯದಲ್ಲಿ ಹಾಜರಿದ್ದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯಗಳು ಸತ್ಯವಾಗಿವೆ.

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರಃ ಶ್ರೀಎ. ಎಸ್.ಬಿ ವಕೀಲರಿಂದಃ**

ದಿನಾಂಕಃ 01.04.2015 ರ ನೊಂದಾಯಿತ ಕ್ರಯದ ಕರಾರು ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ 1 ರಲ್ಲಿ 1, 3 ರಿಂದ 5 ನೇ ಪ್ರತಿವಾದಿಗಳು ಸಹಿ ಮಾಡಿರುತ್ತಾರೆ ಮತ್ತು 1 ನೇ ಪ್ರತಿವಾದಿ 6 ರಿಂದ 9 ನೇ ಪ್ರತಿವಾದಿಗಳ ಗಾರ್ಡಿಯನ್ ಆಗಿ ಸಹಿ ಮಾಡಿರುತ್ತಾರೆ ಎಂದು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 1(ಎ)(ಬಿ)(ಸಿ)(ಡಿ)(ಇ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ 1 ರಲ್ಲಿ 2 ನೇ ಪ್ರತಿವಾದಿ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತಾರೆ ಎಂದು ನೋಡಿ ಗುರುತಿಸಿರುತ್ತಾರೆ. ನಿಪಿ 1 ಕ್ಕೆ ಸಾಕ್ಷಿದಾರರಾಗಿ ಜಿ.ಎಂ. ಸ್ವಾಮಿ ಮತ್ತು ಚೈತನ್ಯ ಸಹಿ ಮಾಡಿರುತ್ತಾರೆ ಎಂದು ಸಾಕ್ಷಿ ಸದರಿಯವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ 1(ಎಫ್) ಮತ್ತು 1(ಜಿ) ಎಂದು ಗುರುತಿಸಲಾಯಿತು. ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು. 9 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ 3 ಎಂದು ಗುರುತಿಸಲಾಯಿತು. ದಿಃ13.01.2003 ರ ನೊಂದಾಯಿತ ಕ್ರಯ ಪತ್ರದ ದೃ.ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು. 16 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 5 ರಿಂದ 20 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ ವಾದಿಗಳ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾ . ದಲ್ಲಿ ಸಾಕ್ಷಿ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪಡಿಸಿದೆ).

ಓ ಹೇ ಕೆ ಸರಿ ಇದೆ.

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಹರಿಹರ.